# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | :848 (884) |
| ಸದಸ್ಯರ ಹೆಸರು | :ಶ್ರೀ. ವೈ.ಎಂ ಸತೀಶ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : ಮಾನ್ಯ ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | :24.07.2024 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಎಷ್ಟು ತಾಲ್ಲೂಕುಗಳು ಇವೆ; ಎಷ್ಟು ತಾಲ್ಲೂಕಿನ ಮಿನಿ ವಿಧಾನಸೌಧಗಳನ್ನು ನಿರ್ಮಾಣ ಮಾಡಲಾಗಿದೆ; ಎಷ್ಟು ನೂತನ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಅನುಮೋದನೆ ನೀಡಲಾಗಿದೆ; ಮಿನಿ ವಿಧಾನ ಸೌಧ ನಿರ್ಮಾಣ ಕಾರ್ಯ ವಿಳಂಬವಾಗಲು ಕಾರಣವೇನು; ತ್ವರಿತವಾಗಿ ನಿರ್ಮಾಣ ಮಾಡಲು ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗಿದೆ; | **ವಿಜಯನಗರ ಜಿಲ್ಲೆಯಲ್ಲಿ 06 ತಾಲ್ಲೂಕುಗಳಿರುತ್ತವೆ.**<br>ಈಗಾಗಲೇ ಹೊಸಪೇಟೆ, ಹಡಗಲಿ, ಹೆಚ್. ಬಿ. ಹಳ್ಳಿ, ಕೂಡ್ಲಿಗಿ, ಹರಪನಹಳ್ಳಿಗಳಲ್ಲಿ ತಾಲ್ಲೂಕು ಆಡಳಿತ ಸೌಧ ನಿರ್ಮಾಣ ಮಾಡಲಾಗಿದೆ.<br>ಕೊಟ್ಟೂರು ತಾಲ್ಲೂಕಿನಲ್ಲಿ ತಾಲ್ಲೂಕು ಆಡಳಿತ ಸೌಧ ನಿರ್ಮಾಣ ಮಾಡಲು ಕೊಟ್ಟೂರು ಗ್ರಾಮದ ಸ.ನಂ.732/ಎ ರಲ್ಲಿ 1.86 ಎಕರೆ ಮತ್ತು ಸ.ನಂ.733/ಎ ರಲ್ಲಿ 75 ಸೆಂಟ್‌ಗಳು ಸೇರಿ ಒಟ್ಟು 2.61 ಎಕರೆ/ಸೆಂಟ್ಸ್ ಜಮೀನನ್ನು ಗುರುತಿಸಲಾಗಿದ್ದು, ಸದರಿ ಕಟ್ಟಡ ನಿರ್ಮಾಣಕ್ಕೆ ಅಂದಾಜು ಮೊತ್ತ ರೂ.15.00 ಕೋಟಿಗಳಿಗೆ ಅನುಮೋದನೆ ನೀಡಿ, ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆಯು ಸ್ವೀಕೃತವಾಗಿದೆ.<br>**ಬಳ್ಳಾರಿ ಜಿಲ್ಲೆಯಲ್ಲಿ 05 ತಾಲ್ಲೂಕುಗಳಿವೆ**<br>ಸಿರುಗುಪ್ಪ ಮತ್ತು ಸಂಡೂರು ತಾಲ್ಲೂಕುಗಳಲ್ಲಿ ಈಗಾಗಲೇ ತಾಲ್ಲೂಕು ಆಡಳಿತ ಸೌಧ ಕಟ್ಟಡಗಳನ್ನು ನಿರ್ಮಿಸಲಾಗಿದೆ.<br>ಬಳ್ಳಾರಿ ತಾಲ್ಲೂಕು ಕಛೇರಿಯು ಜಿಲ್ಲಾ ಸಂಕೀರ್ಣ ಕಟ್ಟಡದಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿದೆ.<br>ಕಂಪ್ಲಿ ಮತ್ತು ಕುರುಗೋಡು ನೂತನ ತಾಲ್ಲೂಕುಗಳಲ್ಲಿ ತಾಲ್ಲೂಕು ಆಡಳಿತ ಸೌಧ ಕಾಮಗಾರಿ ಪ್ರಗತಿಯಲ್ಲಿದ್ದು, ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು. |
| ಆ) | ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲೂ ಮಿನಿ ವಿಧಾನ ಸೌಧಗಳನ್ನು ನಿರ್ಮಾಣ ಮಾಡಿ ಸಂಪೂರ್ಣವಾಗಿ ಯಾವ ಕಾಲಮಿತಿಯೊಳಗೆ ನಿರ್ಮಾಣ ಮಾಡಲಾಗುವುದು? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು) | ಬಳ್ಳಾರಿ ಜಿಲ್ಲೆಯ ಕೊಟ್ಟೂರು ತಾಲ್ಲೂಕಿನಲ್ಲಿ ತಾಲ್ಲೂಕು ಆಡಳಿತ ಸೌಧ ನಿರ್ಮಾಣ ಮಾಡುವ ಕಾಮಗಾರಿಗೆ ಸಂಬಂಧಿಸಿದಂತೆ ತಾಲ್ಲೂಕು ಆಡಳಿತ ಸೌಧ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಒಂದೇ ಮಾದರಿಯಲ್ಲಿ ಹಾಗೂ ಅಂದಾಜು ಮೊತ್ತವನ್ನು ಪರಿಷ್ಕರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಆದುದರಿಂದ, ಸದರಿ ಕಟ್ಟಡದ ವಿನ್ಯಾಸ ಮತ್ತು ಅಂದಾಜು ಮೊತ್ತ ಪರಿಷ್ಕೃತಗೊಂಡ ನಂತರ ಆಡಳಿತಾತ್ಮಕ ಅನುಮೋದನೆ ನೀಡಲು ಕ್ರಮವಹಿಸಲಾಗುವುದು.<br>ವಿಜಯನಗರ ಜಿಲ್ಲೆಯ ಕಂಪ್ಲಿ ಮತ್ತು ಕುರುಗೋಡು ನೂತನ ತಾಲ್ಲೂಕುಗಳಲ್ಲಿ ತಾಲ್ಲೂಕು ಆಡಳಿತ ಸೌಧ ಕಾಮಗಾರಿ ಪ್ರಗತಿಯಲ್ಲಿದ್ದು, ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು. |

ಕಂಇ **78 ಡಬ್ಲ್ಯೂಬಿಆರ್ 2024**

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು